159ಸಿ ಅ
(46)

ಚುಕ್ಕೆ ಗುರುತಿಲ್ಲದ ದಿನಾಂಕ
19/08/26

**ಕರ್ನಾಟಕ ವಿಧಾನ ಪರಿಷತ್ತು**

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**

***

**ವಿಷಯ:** ಭಾರತ ಸಂವಿಧಾನವು "ರಾಜ್ಯವು ಗ್ರಾಮ ಪಂಚಾಯತಿಗಳನ್ನು "ಸಂಘಟಿಸಲು ಕ್ರಮಕೈಗೊಳ್ಳತಕ್ಕದ್ದು ಮತ್ತು ಸ್ವಯಂ ಆಡಳಿತ ಘಟಕಗಳಾಗಿ ಅವು ಕೆಲಸ ಮಾಡುವುದಕ್ಕೆ ಅವಶ್ಯಕವಾಗಬಹುದಾದಂತಹ ಅಧಿಕಾರಗಳನ್ನು ಮತ್ತು ಪ್ರಾಧಿಕಾರಗಳನ್ನು ಅವುಗಳಿಗೆ ಕೊಡತಕ್ಕದ್ದು." ಎಂದು ಹೇಳಿದೆ.

ಸಂವಿಧಾನದ ಆಶಯದಂತೆ ಗ್ರಾಮ ಪಂಚಾಯತಿಗಳು ಸ್ವಯಂ ಆಡಳಿತ ಘಟಕಗಳಾಗಿ ಕೆಲಸ ಮಾಡಲು ಹಾಗೂ ರಾಜ್ಯ ಸರ್ಕಾರದ ಪ್ರತಿ ಯೋಜನೆಯನ್ನು ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ತಲುಪಿಸಲು ಸಮರ್ಥವಾಗುವಂತೆ ಸುಗ್ರಿವಾಜ್ಞೆ ಮೂಲಕ ಕಾನೂನಿಗೆ ತಿದ್ದುಪಡಿ ತಂದು ಕೇರಳ ರಾಜ್ಯದಲ್ಲಿರುವಂತೆ ಗ್ರಾಮ ಪಂಚಾಯತಿಗಳಿಗೂ ವಾರ್ಡಗೊಬ್ಬ ಸದಸ್ಯರಂತೆ, ಕನಿಷ್ಠ 15 ಸದಸ್ಯರಿಗೊಂದು ಗ್ರಾಮ ಪಂಚಾಯತಿ ವ್ಯಾಪ್ತಿಯನ್ನು ಮಿತಗೊಳಿಸಿ, ಪಕ್ಷದ ಚಿಹ್ನೆಯಡಿ ಚುನಾವಣೆ ನಡೆಸುವುದರ ಜೊತೆಗೆ ರಾಜ್ಯದ ಮೂರೂ ಹಂತದ ಸ್ಥಳೀಯ ಸಂಸ್ಥೆ ಜನಪ್ರತಿನಿಧಿಗಳ ಗೌರವಧನವನ್ನು ಹೆಚ್ಚಿಸಬೇಕಾಗಿದೆ.

ನೆರೆಯ ರಾಜ್ಯಗಳಂತೆ ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲು ಆಡಳಿತಾತ್ಮಕ ಮತ್ತು ತಾಂತ್ರಿಕ ತೊಂದರೆಗಳನ್ನು ಕೂಡಲೇ ನಿವಾರಿಸಿ ಏಕ ಕಾಲದಲ್ಲಿ, ಎಲ್ಲಾ ಹಂತದ ಸ್ಥಳೀಯ ಸಂಸ್ಥೆಗಳ 5 ವರ್ಷದ ಅವಧಿ ಮುಗಿದ ತಕ್ಷಣ ಚುನಾವಣೆ ನಡೆಸಲು ಚುನಾವಣಾ ಆಯೋಗಕ್ಕೆ ಅನುಕೂಲವಾಗುವಂತೆ, ಕಾನೂನಿಗೆ ಸೂಕ್ತ ತಿದ್ದುಪಡಿ ತರುವ ಅವಶ್ಯಕತೆಯಿದೆ

ಇತ್ತೀಚೆಗೆ ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು ಸರ್ಕಾರದ ಎಲ್ಲಾ ಇಲಾಖೆಗಳ ಕರ್ತವ್ಯಕ್ಕೆ ಬಳಸಿಕೊಳ್ಳಲಾಗುತ್ತಿದ್ದು ಅವರನ್ನು ಸ್ಥಳೀಯ ಸಂಸ್ಥೆಗಳ ಸಿಬ್ಬಂದಿ/ಹುದ್ದೆಗಳೆಂಬ ನೆಪವೊಡ್ಡಿ ಕಾರ್ಮಿಕ ಇಲಾಖೆಯ ಕನಿಷ್ಠ ವೇತನಕ್ಕಿಂತಲೂ ಕಡಿಮೆ ವೇತನ ನೀಡಲಾಗುತ್ತಿದ್ದು, ಸರ್ಕಾರಿ ನೌಕರರು ನಿಭಾಯಿಸುವ ಎಲ್ಲಾ ಕೌಶಲ್ಯಯುಕ್ತ ಕೆಲಸಗಳನ್ನು ನಿಭಾಯಿಸುವ ಈ ಸಿಬ್ಬಂದಿಗಳಿಗೆ 'ಸಿ' ಮತ್ತು 'ಡಿ' ದರ್ಜೆ ಸರ್ಕಾರಿ ನೌಕರರ ಸ್ಥಾನಮಾನ ನೀಡುವುದು, ಸೇರಿದಂತೆ ಗ್ರಾಮ ಸ್ವರಾಜ್ಯದ ಪರಿಕಲ್ಪನೆಯೊಂದಿಗೆ ಸ್ಥಳೀಯ ಸಂಸ್ಥೆಗಳನ್ನು ಸಬಲೀಕರಣಗೊಳಿಸುವ ಇತರ ಎಲ್ಲಾ ಕ್ರಮಗಳ ಕುರಿತು.

******

**ಉತ್ತರ:** ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ: 10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ. ಈ ಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 240 ರ ಉಪಬಂಧನ್ವಯ ರಾಜ್ಯ ಸರ್ಕಾರ ವಿವಿಧ ಅಭಿವೃದ್ಧಿ ಇಲಾಖೆಗಳ ಕಾರ್ಯಕ್ರಮಗಳ ಅನುಷ್ಠಾನದ ನಿಯಂತ್ರಣ ಹಾಗೂ ಮೇಲ್ವಿಚಾರಣೆಯನ್ನು ಸರ್ಕಾರ ಈಗಾಗಲೇ ಅಧಿನಿಯಮದ ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ರಲ್ಲಿ ಅಧಿಸೂಚಿಸಿದೆ.

(signature)

ನಗರಾಭಿವೃದ್ಧಿ ಇಲಾಖೆಯು ಕೆಲವು ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿ / ಪುರಸಭೆ / ನಗರ ಸಭೆಗಳಾಗಿ ಪರಿವರ್ತನೆ ಮಾಡಿದ್ದು, 10 ಜಿಲ್ಲೆಗಳ ಮತ್ತು 14 ತಾಲ್ಲೂಕುಗಳ ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, 31 ಜಿಲ್ಲಾ ಪಂಚಾಯತಿಗಳ ಮತ್ತು 239 ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿಗಧಿ ಮಾಡಿ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ.

ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ನಿಗಧಿಗೊಳಿಸುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಮೀಸಲಾತಿ ಪ್ರಕ್ರಿಯೆ ಪೂರ್ಣಗೊಂಡ ಬಳಿಕ, ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗುವುದು, ಬಹುತೇಕ ವರ್ಷಾಂತ್ಯದೊಳಗೆ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತದೆ.

ಸರ್ಕಾರದ ಸುತ್ತೋಲೆ ಸಂಖ್ಯೆ: RDPR 486 GPA 2025, ದಿನಾಂಕ:01-06-2026 ರಲ್ಲಿ ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆ- 2026 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 5 ರಂತೆ ಗ್ರಾಮ ಪಂಚಾಯತಿಗೆ ವರ್ಗವಾರು ಸದಸ್ಯರ ಸ್ಥಾನಗಳನ್ನು ಮತ್ತು ಮೀಸಲಾತಿ ನಿಗಧಿಪಡಿಸಿ, ಅಧಿಸೂಚನೆ ಹೊರಡಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

ಮೇಲ್ಕಂಡಂತೆ ಜಿಲ್ಲಾಧಿಕಾರಿಗಳು ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಅವಧಿ ಮುಗಿದ ಗ್ರಾಮ ಪಂಚಾಯಿತಿಗಳಿಗೆ ಬಹುತೇಕ ವರ್ಷಾಂತ್ಯದೊಳಗೆ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993 ನಿಯಮ 20, 21 ಮತ್ತು 22 ರನ್ವಯ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಪಕ್ಷದ ಚಿಹ್ನೆಯ ಆಧಾರದ ಮೇಲೆ ಚುನಾವಣೆ ನಡೆಸಲಾಗುತ್ತಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 4ರನ್ವಯ ಪ್ರತಿ 400 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು, ಪ್ರಕರಣ 5(5) ರನ್ವಯ ಗ್ರಾಮ ಪಂಚಾಯಿತಿಗೆ ಪ್ರತಿಯೊಂದು ಚುನಾವಣಾ ಕ್ಷೇತ್ರಕ್ಕೂ ಎಷ್ಟು ಸ್ಥಾನಗಳನ್ನು ಅಂದರೆ ಒಂದು ಅಥವಾ ಅದಕ್ಕೂ ಹೆಚ್ಚಿನ ಸ್ಥಾನಗಳನ್ನು ಹಂಚಿಕೆ ಮಾಡಬಹುದಾಗಿದೆ. ಪ್ರಕರಣ 7ರನ್ವಯ ಗ್ರಾಮ ಪಂಚಾಯಿತಿಗೆ ಚುನಾವಣೆಗಳನ್ನು ಪಕ್ಷದ ಆಧಾರ ರಹಿತವಾಗಿ ಮತದಾನದ ಮೂಲಕ ನಡೆಸಲು ಅವಕಾಶ ಕಲ್ಪಿಸಲಾಗಿದೆ.

ಸರ್ಕಾರ ಆದೇಶ ಸಂಖ್ಯೆ:ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022 ರನ್ವಯ ಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.2000/- ಗೌರವಧನವನ್ನು ಪಾವತಿಸಲು ಆದೇಶಿಸಲಾಗಿದೆ.

ಸರ್ಕಾರ ಆದೇಶ ಸಂಖ್ಯೆ:ಗ್ರಾಅಪ 116 ಜಿಪಸ 2017, ದಿನಾಂಕ:03.05.2017 ರನ್ವಯ ಮಾಸಿಕವಾಗಿ ತಾಲ್ಲೂಕು ಪಂಚಾಯತಿ ಅಧ್ಯಕ್ಷರಿಗೆ ರೂ.6000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.3000/- ಗೌರವಧನವನ್ನು ಹಾಗೂ ಮಾಸಿಕವಾಗಿ ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರೂ.35000/-, ಉಪಾಧ್ಯಕ್ಷರಿಗೆ ರೂ.15000/- ಮತ್ತು ಸದಸ್ಯರಿಗೆ ರೂ.5000/- ಗೌರವಧನವನ್ನು ಪಾವತಿಸಲು ಆದೇಶಿಸಲಾಗಿದೆ.

ಭಾರತ ಸಂವಿಧಾನದ ಅನುಚ್ಛೇದ 242-ಬಿ ರಂತೆ ಗ್ರಾಮ ಪಂಚಾಯಿತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯಿತಿಯು ಸ್ಥಳೀಯ ಪ್ರಾಧಿಕಾರವಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುತ್ತದೆ. ಗ್ರಾಮ ಪಂಚಾಯಿತಿ ನೌಕರರನ್ನು ಸಿ ಮತ್ತು ಡಿ ದರ್ಜೆ ನೌಕರರೆಂದು ಪರಿಗಣಿಸಲು ಆಡಳಿತಾತ್ಮಕವಾಗಿ ಸಾಧ್ಯವಾಗುವುದಿಲ್ಲ.

ಸಂಖ್ಯೆ:RDPR 774 GPA 2026

(ಈಶ್ವರ ಬಿ. ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.